Vice President words about quality education

ಪ್ರಜಾವಾಣಿ

7ನೇ ಜನವರಿ 2015

ಉಪ ರಾಷ್ಟ್ರಪತಿ ಎಂ.ಹಮೀದ್ ಅನ್ಸಾರಿ ಅಭಿಮತ

# ಶಿಕ್ಷಣ ಯೋಜನೆಗಳಲ್ಲಿ ಎಚ್ಚರಿಕೆ ಅಗತ್ಯ

**ಪ್ರಜಾವಾಣಿ ವಾರ್ತೆ**



ಬೆಂಗಳೂರಿನ ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ ಸುವರ್ಣ ಮಹೋತ್ಸವದಲ್ಲಿ ಉಪರಾಷ್ಟ್ರಪತಿ ಎಂ.ಹಮೀದ್ ಅನ್ಸಾರಿ ಅವರಿಗೆ ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಅಧ್ಯಕ್ಷ ಡಾ.ಎಂ.ಕೆ.ಪಾಂಡುರಂಗ ಶೆಟ್ಟಿ ಅವರು ಸ್ಮರಣಿಕೆ ನೀಡಿದರು —ಪ್ರಜಾವಾಣಿ ಚಿತ್ರ

ಬೆಂಗಳೂರು: 'ಅಂತರರಾಷ್ಟ್ರೀಯ ಗುಣಮಟ್ಟಕ್ಕೆ ಹೋಲಿಸಿದಾಗ ನಮ್ಮ ಉನ್ನತ ಶಿಕ್ಷಣ ಕ್ಷೇತ್ರ ಬಹಳ ಹಿಂದು ಳಿದಿದೆ. ಆದ್ದರಿಂದ, ಮುಂದಿನ ಶಿಕ್ಷಣ ಯೋಜನೆಗಳ ಕುರಿತು ಎಚ್ಚರಿಕೆ ವಹಿಸುವ ಅಗತ್ಯವಿದೆ' ಎಂದು ಉಪ ರಾಷ್ಟ್ರಪತಿ ಎಂ.ಹಮೀದ್ ಅನ್ಸಾರಿ ಅಭಿಪ್ರಾಯಪಟ್ಟರು.

ಬೆಂಗಳೂರಿನ ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

'1947ರಿಂದ ನಾವು ಈವರೆಗೆ ಸಾಕಷ್ಟು ಸಾಧನೆ ಮಾಡಿದ್ದೇವೆ. ನಮ್ಮಲ್ಲಿ ಇಂದು 652 ವಿಶ್ವವಿದ್ಯಾಲಯ ಗಳಿವೆ. ಮಾನ್ಯತೆ ಪಡೆದ 33 ಸಾವಿರ ಕಾಲೇಜು ಮತ್ತು ಶಿಕ್ಷಣ ಸಂಸ್ಥೆಗಳಿವೆ. ಆದರೂ, ಉನ್ನತ ಶಿಕ್ಷಣದಿಂದ ಇಂದಿಗೂ ಮಹಿಳೆ ಮತ್ತು ದುರ್ಬಲ ವರ್ಗದವರು ವಂಚಿತರಾಗಿದ್ದಾರೆ' ಎಂದು ವಿಷಾದಿಸಿದರು.

'ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗುಣ ಮಟ್ಟ, ತರಬೇತಾದ ಶಿಕ್ಷಕರು ಮತ್ತು ಮೂಲ ಸೌಕರ್ಯಗಳ ಕೊರತೆ ಇದೆ. ಅರ್ಥವಿಲ್ಲದ ಪಠ್ಯಕ್ರಮ ಅಳವಡಿಸ ಲಾಗಿದೆ. ಪ್ರತಿ ವರ್ಷ ದೇಶದಲ್ಲಿ ಏಳು ಲಕ್ಷ ವಿದ್ಯಾರ್ಥಿಗಳು ವಿಜ್ಞಾನ ಮತ್ತು ಎಂಜಿನಿಯರಿಂಗ್ ಪದವಿ ಶಿಕ್ಷಣ ಪೂರೈಸುತ್ತಾರೆ. ಅವರಲ್ಲಿ ಕೇವಲ ಶೇ 25 ರಷ್ಟು ಪದವೀಧರರು ಮಾತ್ರ ಉದ್ಯೋಗಕ್ಕೆ ಅರ್ಹವಾದವರು ಎಂದು ಉದ್ಯಮ ಕ್ಷೇತ್ರ ಹೇಳುತ್ತದೆ' ಎಂದು ತಿಳಿಸಿದರು.

'2011ರಲ್ಲಿ ದೇಶದ ಒಟ್ಟು ಜನಸಂಖ್ಯೆಯ ಅರ್ಧದಷ್ಟು ಜನರು 24 ವರ್ಷದೊಳಗಿನ ಯುವ ಜನತೆಯಾ ಗಿತ್ತು. 2020ರ ವೇಳೆಗೆ ದುಡಿಯುವ ಯುವ ಸಮುದಾಯದ ಸಂಖ್ಯೆ ಜನಸಂಖ್ಯೆಯ ಮೂರನೆಯ ಎರಡು ಭಾಗದಷ್ಟು ಏರಿಕೆಯಾಗಲಿದೆ. ಅವರ ಆಶೋತ್ತರಗಳನ್ನು ಈಡೇರಿಸುವಂತಹ ಅವಕಾಶಗಳನ್ನು ನಿರ್ಮಾಣ ಮಾಡಿ ಈ ಸಮೂಹವನ್ನು ನಾವು ಬಳಸಿಕೊಳ್ಳ ಬೇಕಿದೆ' ಎಂದರು.

ರಾಜ್ಯಪಾಲ ವಜುಭಾಯಿ ವಾಲಾ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉನ್ನತ ಶಿಕ್ಷಣ ಸಚಿವ ಆರ್.ವಿ.ದೇಶಪಾಂಡೆ, ಕಾಲೇಜಿನ ಪ್ರಾಂಶುಪಾಲ ಡಾ.ಬಿ.ಎಸ್. ಸತ್ಯನಾರಾಯಣ ಮತ್ತಿತರರು ಉಪಸ್ಥಿತರಿದ್ದರು.